**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.**
**ಸಿ.ಸಿ.ನಂ. 984/2022**

ದಿನಾಂಕಃ 26-9-2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಪಿ.ಡಬ್ಲ್ಯೂಃ4 ಸಿ.ಡಬ್ಲ್ಯೂಃ **2**

ಸಾಕ್ಷಿಯ ಹೆಸರು ಃ ಕಾಂತರಾಜ್
ಗಂಡನ ಹೆಸರು ಃ ಸಿದ್ದಯ್ಯ
ವಯಸ್ಸು ಃ 48 ವರ್ಷ
ಉದ್ಯೋಗ ಃ ವ್ಯವಸಾಯ
ವಾಸ ಃ ಎಸ್ ಬಿದರೆ

**ಮುಖ್ಯ ವಿಚಾರಣೆಃ ಮಾನ್ಯ ಸಸಅ ಅವರಿಂದಃ-**

ನಾನು ಯಾವುದೇ ಘಟನೆಯನ್ನು ನೋಡಿರುವುದಿಲ್ಲ. ನನ್ನ ಮುಂದೆ ಯಾವುದೇ ಮಹಜರ್ ಮಾಡಿರುವುದಿಲ್ಲ ಮತ್ತು ಯಾವುದೇ ವಾಹವನ್ನು ವಶಪಡಿಸಿಕೊಂಡಿರುವುದಿಲ್ಲ. ಠಾಣೆಗೆ ಹೋದಾಗ ಪೊಲೀಸರು ನನ್ನ ಸಹಿ ಪಡೆದಿರುತ್ತಾರೆ. ಸಾಕ್ಷಿಯು ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಮಹಜರ್ ಅನ್ನು ಈಗಾಗಲೇ ನಿಪಿ-1, ಸಹಿಯನ್ನು ನಿಪಿ-1(ಡಿ) ಎಂದು ಗುರುತಿಸಲಾಯಿತು. ಅಮಾನತು ಮಹಜರ್ ನಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-3(ಡಿ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟೀಸವಾಲುಃ ಮಾನ್ಯ ಸಸಅ. ರವರಿಂದ ಃ**

ದಿಃ 14-08-2021 ರಂದು ಪೊಲೀಸರು ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಚಾಸಾ-8 ರವರು ತೋರಿಸಿದ ಸ್ಥಳದಲ್ಲಿ ಮಹಜರ್ ಅನ್ನು ಬೆಳೆಗ್ಗ 11-00 ರಿಂದ 12-00 ರ ವರೆಗೆ ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ಸಂಜೆ 6-00 ಕ್ಕೆ ಅಪಘಾತಕೊಳ್ಳಪಟ್ಟ ವಾಹನಗಳಾದ ಟ್ರ್ಯಾಕ್ಟರ್ ಇಂಜಿನ್ ಕೆಎ-46-ಟಿ-5878 ಮತ್ತು ಟ್ರೈಲರ್ ಕೆಎ-46-5879 ಅನ್ನು ನಮ್ಮ ಮುಂದೆ ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತಿದ್ದೇನೆಂದರೆ ಸರಿಯಲ್ಲ.

**ಮರು ವಿಚಾರಣೆ ಃ ಇಲ್ಲ**

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ ಎ ಒ

2 ನೇ ಹೇಃಪ್ರಃಪ್ರಃದಃನ್ಯಾಃದಂ.,ರವರು,
ಕಡೂರು.